# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 655
ಸದಸ್ಯರ ಹೆಸರು : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 22.07.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr>
<td>ಅ)</td>
<td>ರಾಜ್ಯದಲ್ಲಿ ಅನೇಕ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ಮೇಲ್ಛಾವಣಿ ಸೋರುವಿಕೆ ಮುಂತಾದ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;</td>
<td>
ಬಂದಿದೆ.
ಕಳೆದ ಮೂರು ವರ್ಷಗಳಲ್ಲಿ, ಸರ್ಕಾರಿ ಶಾಲೆಗಳ ದುರಸ್ತಿ ಕಾಮಗಾರಿ, ಶೌಚಾಲಯ ನಿರ್ಮಾಣ ಹಾಗೂ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಅನುದಾನ ಮಂಜೂರಾಗಿರುತ್ತದೆ.
➢ ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿ:
<table>
<tr><th>ವರ್ಷ</th><th>ಶಾಲೆಗಳ ಸಂಖ್ಯೆ</th><th>ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ)</th><th>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>2021-22</td><td>518</td><td>1947.00</td><td>1947.00</td></tr>
<tr><td>2022-23</td><td>1833</td><td>4650.00</td><td>4650.00</td></tr>
<tr><td>2023-24</td><td>2162</td><td>7000.00</td><td>7000.00</td></tr>
<tr><td>Total</td><td>4513</td><td>13597.00</td><td>13597.00</td></tr>
</table>
2024–25ನೇ ಸಾಲಿಗೆ ಸರ್ಕಾರಿ ಶಾಲಾ ಕೊಠಡಿಗಳ ದುರಸ್ಥಿ ಕಾಮಗಾರಿಗಳಿಗೆ ಮುಂದುವರೆದ ಯೋಜನೆಗೆ ರೂ.5129.66 ಲಕ್ಷಗಳು ಹಾಗೂ ಹೊಸ ಯೋಜನೆಗೆ ರೂ.10000.00ಲಕ್ಷಗಳು ನಿಗದಿಯಾಗಿದ್ದು, ಶಾಲಾ ಕೊಠಡಿ ದುರಸ್ತಿಗೊಳಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ.
➢ ಸರ್ಕಾರಿ ಶಾಲೆಗಳಿಗೆ ಶೌಚಾಲಯ ನಿರ್ಮಾಣ:
ನರೇಗಾ ಒಗ್ಗೂಡಿಸುವಿಕೆಯ ಮೂಲಕ ರಾಜ್ಯ ವಲಯದ ಯೋಜನೆಯಡಿಯಲ್ಲಿ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣಕ್ಕಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.
<table>
<tr><th>ವರ್ಷ</th><th>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳು)</th></tr>
<tr><td>2021-22</td><td>3500.00</td></tr>
<tr><td>2022-23</td><td>3500.00</td></tr>
<tr><td>2023-24</td><td>8000.00</td></tr>
<tr><td>ಒಟ್ಟು</td><td>15000.00</td></tr>
</table>
2024–25ನೇ ಸಾಲಿನಲ್ಲಿ ಶೌಚಾಲಯ ನಿರ್ಮಾಣಕ್ಕೆ ರೂ.12279.00 ಲಕ್ಷಗಳ ಅನುದಾನ ನಿಗದಿಯಾಗಿದ್ದು, ಶೌಚಾಲಯ ನಿರ್ಮಾಣಕ್ಕೆ ಕ್ರಮವಹಿಸಲಾಗಿದೆ.
</td>
</tr>
</table>

<table>
<tr>
<td></td>
<td></td>
<td>
➢ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆ:<br>
ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗಾಗಿ, ನಿರ್ವಹಣಾ ವೆಚ್ಚವನ್ನು ಕಳೆದ ವರ್ಷಗಳಲ್ಲಿ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.
<table>
<tr><th>ವರ್ಷ</th><th>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>2021–22</td><td>2500.00</td></tr>
<tr><td>2022–23</td><td>3500.00</td></tr>
<tr><td>2023–24</td><td>7122.00</td></tr>
</table>
<ul>
<li>2024–25ನೇ ಸಾಲಿನಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗಾಗಿ ರೂ.5807.00ಲಕ್ಷಗಳ ಅನುದಾನ ನಿಗದಿಪಡಿಸಲಾಗಿದೆ.</li>
<li>ರಾಜ್ಯವಲಯ ಯೋಜನೆ, ವಿಶೇಷ ಅಭಿವೃದ್ಧಿ ಯೋಜನೆ, ಆರ್.ಐ.ಡಿ.ಎಫ್ ಯೋಜನೆ ಎಸ್.ಡಿ.ಆರ್.ಎಫ್ ಯೋಜನೆಯಡಿಯಲ್ಲಿ ಕೊಠಡಿ ನಿರ್ಮಾಣ/ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆ.</li>
<li>ರಾಜ್ಯದಾದ್ಯಂತ ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸ್ಥಳೀಯ ಸಂಸ್ಥೆಗಳಾದ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ಅನ್ನು ಹೊರಡಿಸಲಾಗಿದೆ.</li>
<li>ಜಲ–ಜೀವನ ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ಶಾಲೆಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.</li>
</ul>
</td>
</tr>
<tr>
<td>ಆ)</td>
<td>ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಹುಂಬ್ರಾಪಾಣಿ ಗ್ರಾಮದ ಕಿರಿಯ ಪ್ರಾಥಮಿಕ ಶಾಲೆ ಮರಾಠಿ ಮಾಧ್ಯಮದ ಕಾರಣ ಸ್ಥಗಿತಗೊಂಡಿದ್ದು, ಮಕ್ಕಳ ಸಂಖ್ಯೆ ಹೆಚ್ಚಾಗಿರುವುದರಿಂದ ಕನ್ನಡ ಮಾಧ್ಯಮದ ತರಗತಿ ಪುನಃ ಪ್ರಾರಂಭವಾಗಿ ಮಕ್ಕಳಿಗೆ ತುಂಬಾ ಅನುಕೂಲವಾಗಿದ್ದು, ಅನೇಕ ವರ್ಷಗಳಿಂದ ಶಾಲೆ ಮುಚ್ಚಲ್ಪಟ್ಟಿದ್ದರಿಂದ ಕುಡಿಯುವ ನೀರು, ಶೌಚಾಲಯ, ಕಾಂಪೌಂಡ್, ಮೇಲ್ಛಾವಣಿ ಸೋರುವಿಕೆ ಮುಂತಾದ ಅತ್ಯಾವಶ್ಯಕ ಸೌಲಭ್ಯಗಳಿಗಾಗಿ ಸರ್ಕಾರವು ಆದ್ಯತೆಯ ಮೇರೆಗೆ ಸದರಿ ಶಾಲೆಯ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ?</td>
<td>
<ul>
<li>ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಹುಂಬ್ರಾಪಾಣಿ ಗ್ರಾಮದ ಕಿರಿಯ ಪ್ರಾಥಮಿಕ ಶಾಲೆಯು ಜೂನ್ 2017ನೇ ಸಾಲಿನಲ್ಲಿ ಮರಾಠಿ ಮಾಧ್ಯಮದ ಮಕ್ಕಳ ದಾಖಲಾತಿ ಕಡಿಮೆಯಾದ ಕಾರಣ ಮುಚ್ಚಲ್ಪಟ್ಟಿದ್ದು, ಪ್ರಸಕ್ತ ಶೈಕ್ಷಣಿಕ ವರ್ಷದ ಜೂನ್ 2024 ರಂದು ಪುನಃ ಕನ್ನಡ ಮಾಧ್ಯಮದಲ್ಲಿ ಶಾಲೆಯನ್ನು ಪ್ರಾರಂಭಿಸಲಾಗಿರುತ್ತದೆ.</li>
<li>ಸದರಿ ಶಾಲೆಯಲ್ಲಿ 1 ರಿಂದ 5ನೇ ತರಗತಿಯವರೆಗೆ ಒಟ್ಟು 25 ಮಕ್ಕಳಿದ್ದು, ಒಬ್ಬ ಶಿಕ್ಷಕರನ್ನು ನಿಯೋಜನೆ ಮೇಲೆ ಮತ್ತು ಒಬ್ಬ ಅತಿಥಿ ಶಿಕ್ಷಕರನ್ನು ನೇಮಿಸಿ ತರಗತಿಗಳನ್ನು ನಡೆಸಲಾಗುತ್ತಿದೆ.</li>
<li>ಸದರಿ ಶಾಲೆಗೆ ಮೂಲಭೂತ ಸೌಲಭ್ಯಗಳಾದ ಕೊಠಡಿಗಳ ದುರಸ್ತಿ, ಶೌಚಾಲಯ ಹಾಗೂ ಕಾಂಪೌಂಡ್ ಅವಶ್ಯಕತೆಯಿದ್ದು ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.</li>
</ul>
</td>
</tr>
</table>

**ಇಪಿ: 216 ಯೋಸಕ 2024**

(ಎಸ್.ಮಧು ಬಂಗಾರಪ್ಪ)

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**